**All India Radio: Bangalore**
**National Bulletins In Kannada**
**13-08-2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**13-08-2025 / 7.35 am**

**<><*<><>*><>**

ಮುಖ್ಯಾಂಶಗಳು

೧. ಸೆಮಿಕಂಡಕ್ಟರ್ ವಲಯದಲ್ಲಿ ಭಾರತ ಕ್ಷಿಪ್ರ ಪ್ರಗತಿ - ಪ್ರಧಾನಿ ನರೇಂದ್ರ ಮೋದಿ

೨. ಗಣಿ ಹಾಗೂ ಖನಿಜಗಳ ಅಭಿವೃದ್ಧಿ ಮತ್ತು ನಿಯಂತ್ರಣ ತಿದ್ದುಪಡಿ ಮಸೂದೆಗೆ ಲೋಕಸಭೆ ಅಂಗೀಕಾರ

೩. ನವದೆಹಲಿಯಲ್ಲಿ ಇಂದು ಭಾರತ-ಸಿಂಗಾಪುರ ಸಚಿವರ ದುಂಡುಮೇಜಿನ ೩ನೇ ಸುತ್ತಿನ ಸಭೆ

೪. ವಿಶ್ವ ಕ್ರೀಡಾಕೂಟ: ಮಹಿಳೆಯರ ೫೨ ಕೆಜಿ ವುಶು ಫೈನಲ್‌ನಲ್ಲಿ ಭಾರತದ ನಮ್ರತಾ ಬಾತ್ರಾಗೆ ಬೆಳ್ಳಿ

><><><><><><><

ಭಾರತವು ಸೆಮಿಕಂಡಕ್ಟರ್ ವಲಯದಲ್ಲಿ ಕ್ಷಿಪ್ರ ಪ್ರಗತಿ ಸಾಧಿಸುತ್ತಿದೆ. ತನ್ನ ಡಿಜಿಟಲ್ ಭವಿಷ್ಯವನ್ನು ಶಕ್ತಗೊಳಿಸಲು ಮತ್ತು ಜಾಗತಿಕ ನಾವೀನ್ಯತೆಗೆ ಚಾಲನೆ ನೀಡಲು ಬಲವಾದ ಪರಿಸರ ವ್ಯವಸ್ಥೆಯನ್ನು ನಿರ್ಮಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಆಂಧ್ರಪ್ರದೇಶ, ಒಡಿಶಾ ಮತ್ತು ಪಂಜಾಬ್‌ನಲ್ಲಿ ಸೆಮಿಕಂಡಕ್ಟರ್ ಘಟಕಗಳ ಅನುಮೋದನೆಗೆ ಸಂಬಂಧಿಸಿದ ಕೇಂದ್ರ ಸಚಿವ ಸಂಪುಟದ ನಿರ್ಧಾರವು ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಉನ್ನತ ಕೌಶಲ್ಯದ ಉದ್ಯೋಗಗಳನ್ನು ಸೃಷ್ಟಿಸುತ್ತದೆ ಮತ್ತು ಜಾಗತಿಕ ಪೂರೈಕೆ ಸರಪಳಿಯಲ್ಲಿ ಭಾರತವನ್ನು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ. ಪಂಜಾಬ್ ಮತ್ತು ಆಂಧ್ರಪ್ರದೇಶದಲ್ಲಿ ನಾಲ್ಕು ಸಾವಿರದ ೫೯೪ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ನಾಲ್ಕು ಹೊಸ ಸೆಮಿಕಂಡಕ್ಟರ್ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ತೆಗೆದುಕೊಂಡ ಸಚಿವ ಸಂಪುಟ ನಿರ್ಧಾರದ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಸರ್ಕಾರವು ಸೆಮಿಕಂಡಕ್ಟರ್ ಮತ್ತು ಎಲೆಕ್ಟ್ರಾನಿಕ್ಸ್ ವಲಯಕ್ಕೆ ದೃಢವಾದ ಪರಿಸರ ವ್ಯವಸ್ಥೆಯನ್ನು ನಿರ್ಮಿಸುತ್ತಿದೆ ಎಂದು ಹೇಳಿದರು. ಕಳೆದ ೧೧ ವರ್ಷಗಳಲ್ಲಿ ಮೊಬೈಲ್ ಉತ್ಪಾದನಾ ಘಟಕಗಳ ಸಂಖ್ಯೆ ೨ ರಿಂದ ೩೦೦ ಕ್ಕೆ ಏರಿಕೆಯಾಗಿದೆ. ಮೊಬೈಲ್ ಫೋನ್ ರಫ್ತು ಎರಡು ಲಕ್ಷ ಕೋಟಿ ರೂಪಾಯಿಗಳನ್ನು ತಲುಪುವ ಮೂಲಕ ೧೨೭ ಪಟ್ಟು ಹೆಚ್ಚಾಗಿದೆ. ಚಿಪ್ ವಿನ್ಯಾಸಕ್ಕಾಗಿ ಸರ್ಕಾರ ದೇಶೀಯ ಕಂಪನಿಗಳು, ಸ್ಟಾರ್ಟ್‌ಅಪ್‌ಗಳು ಮತ್ತು ಎಂಎಸ್‌ಎಂಇಗಳನ್ನು ಬೆಂಬಲಿಸುತ್ತಿದೆ ಎಂದು ಅವರು ಹೇಳಿದರು. ಸೆಪ್ಟೆಂಬರ್ ೨ ರಿಂದ ನವದೆಹಲಿಯಲ್ಲಿ ಸೆಮಿಕಾನ್ ಇಂಡಿಯಾ ೨೦೨೫ ಅನ್ನು ಆಯೋಜಿಸಲಾಗುವುದು. ಮಲೇಷ್ಯಾ, ಜಪಾನ್, ಸಿಂಗಾಪುರ ಮತ್ತು ದಕ್ಷಿಣ ಕೊರಿಯಾಗಳು ಸೆಮಿಕಾನ್ ಇಂಡಿಯಾದಲ್ಲಿ ಪಾಲುದಾರರಾಗಿ ಭಾಗವಹಿಸುತ್ತವೆ ಎಂದು ತಿಳಿಸಿದರು. ಚಾರ್‌ಬಾಗ್‌ನಿಂದ ವಸಂತ್ ಕುಂಜ್ ನಡುವಿನ ಲಕ್ನೋ ಮೆಟ್ರೋ ಹಂತ ೧ಬಿ ಅನ್ನು ಸರ್ಕಾರ ಐದು ಸಾವಿರದ ೮೦೧ ಕೋಟಿ ರೂಪಾಯಿಗಳಿಗೂ ಹೆಚ್ಚು ಅಂದಾಜು ವೆಚ್ಚದಲ್ಲಿ ಅನುಮೋದಿಸಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು. ೭೦೦ ಮೆಗಾವ್ಯಾಟ್ ಸಾಮರ್ಥ್ಯದ ಜಲವಿದ್ಯುತ್ ಯೋಜನೆಗೆ ಸರ್ಕಾರ ಅನುಮೋದನೆ ನೀಡಿದೆ. ಈ ಯೋಜನೆಯನ್ನು ಅರುಣಾಚಲ ಪ್ರದೇಶದ ಶಿ ಯೋಮಿ ಜಿಲ್ಲೆಯಲ್ಲಿ ನಿರ್ಮಿಸಲಾಗುವುದು ಮತ್ತು

ಇದರ ನಿರ್ಮಾಣವನ್ನು ಆರು ವರ್ಷಗಳಲ್ಲಿ ಪೂರ್ಣಗೊಳಿಸಲಾಗುವುದು. ಈ ಯೋಜನೆಯು ಈ ಪ್ರದೇಶದಲ್ಲಿ ಸ್ಥಿರವಾದ ವಿದ್ಯುತ್ ಮೂಲವನ್ನು ಒದಗಿಸುತ್ತದೆ ಮತ್ತು ಪ್ರಾದೇಶಿಕ ಅಭಿವೃದ್ಧಿಯನ್ನು ಉತ್ತೇಜಿಸುತ್ತದೆ ಎಂದು ಅವರು ಹೇಳಿದರು.

><><><><><><><

ಲೋಕಸಭೆಯು ಗಣಿ ಹಾಗೂ ಖನಿಜಗಳು ಅಭಿವೃದ್ಧಿ ಮತ್ತು ನಿಯಂತ್ರಣ ತಿದ್ದುಪಡಿ ಮಸೂದೆ-೨೦೨೫ ಅನ್ನು ಅಂಗೀಕರಿಸಿದೆ. ಈ ಮಸೂದೆಯು ೧೯೫೭ ರ ಗಣಿ ಮತ್ತು ಖನಿಜಗಳು ಅಭಿವೃದ್ಧಿ ಮತ್ತು ನಿಯಂತ್ರಣ ಕಾಯ್ದೆಯನ್ನು ಮತ್ತಷ್ಟು ತಿದ್ದುಪಡಿ ಮಾಡುತ್ತದೆ. ಗುತ್ತಿಗೆದಾರರು ಅಸ್ತಿತ್ವದಲ್ಲಿರುವ ಗುತ್ತಿಗೆಗೆ ಇತರೆ ಖನಿಜಗಳನ್ನು ಸೇರಿಸಲು ರಾಜ್ಯ ಸರ್ಕಾರಕ್ಕೆ ಅರ್ಜಿ ಸಲ್ಲಿಸಬಹುದು ಎಂದು ಮಸೂದೆ ಹೇಳುತ್ತದೆ. ನಿರ್ಣಾಯಕ ಮತ್ತು ಕಾರ್ಯತಂತ್ರದ ಖನಿಜಗಳು ಮತ್ತು ಇತರೆ ನಿರ್ದಿಷ್ಟ ಖನಿಜಗಳನ್ನು ಸೇರಿಸಲು, ಯಾವುದೇ ಹೆಚ್ಚುವರಿ ಮೊತ್ತವನ್ನು ಪಾವತಿಸಬೇಕಾಗಿಲ್ಲ. ಇವುಗಳಲ್ಲಿ ಲಿಥಿಯಂ, ಗ್ರ್ಯಾಫೈಟ್, ನಿಕಲ್, ಕೋಬಾಲ್ಟ್, ಚಿನ್ನ ಮತ್ತು ಬೆಳ್ಳಿಯಂತಹ ಖನಿಜಗಳು ಸೇರಿವೆ.

><><><><><><><

'ಒಂದು ರಾಷ್ಟ್ರ, ಒಂದು ಚುನಾವಣಾ ಮಸೂದೆ' ಕುರಿತ ಜಂಟಿ ಸಂಸದೀಯ ಸಮಿತಿಯ ವರದಿಯನ್ನು ಮಂಡಿಸಲು ಲೋಕಸಭೆಯು ಗಡುವನ್ನು ವಿಸ್ತರಿಸಿದೆ. ಸಮಿತಿಯು ಈಗ ೨೦೨೫ರ ಚಳಿಗಾಲದ ಅಧಿವೇಶನದ ಕೊನೆಯ ವಾರದ ಮೊದಲ ದಿನದೊಳಗೆ ತನ್ನ ವರದಿಯನ್ನು ಸಲ್ಲಿಸಲಿದೆ. ಬಿಜೆಪಿ ಸಂಸದ ಪಿ.ಪಿ.ಚೌಧರಿ 'ಸಂವಿಧಾನ ನೂರ ಇಪ್ಪತ್ತೊಂಬತ್ತನೇ ತಿದ್ದುಪಡಿ ಮಸೂದೆ, ೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು ತಿದ್ದುಪಡಿ ಮಸೂದೆ, ೨೦೨೪ರ ಜಂಟಿ ಸಮಿತಿಯ ವರದಿಯ ಕುರಿತು ಪ್ರಸ್ತಾವನೆಯನ್ನು ಮಂಡಿಸಿದರು.

><><><><><><><

ವಿದೇಶಿ ಒತ್ತಡದ ಹೊರತಾಗಿಯೂ ವ್ಯಾಪಾರ ಒಪ್ಪಂದಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ದಿಟ್ಟ ನಿರ್ಧಾರಕ್ಕಾಗಿ ದೇಶಾದ್ಯಂತದ ರೈತರು ಅವರಿಗೆ ಧನ್ಯವಾದ ಅರ್ಪಿಸಿದರು. ರೈತರ ಹಿತಾಸಕ್ತಿಗಳನ್ನು ರಕ್ಷಿಸಲು ಸರ್ಕಾರ ತೆಗೆದುಕೊಂಡ ನಿರ್ಣಾಯಕ ಕ್ರಮಕ್ಕೆ ಕೃತಜ್ಞತೆ ಮತ್ತು ಬೆಂಬಲವನ್ನು ವ್ಯಕ್ತಪಡಿಸಲು ರೈತ ಸಂಘಟನೆಯ ಮುಖಂಡರು ಮತ್ತು ಕೃಷಿಕರ ದೊಡ್ಡ ತಂಡ ನವದೆಹಲಿಯಲ್ಲಿ ನಿನ್ನೆ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಭೇಟಿಯಾಯಿತು. ಸಂವಾದದ ಸಂದರ್ಭದಲ್ಲಿ, ನಕಲಿ ರಸಗೊಬ್ಬರಗಳು ಮತ್ತು ರಾಸಾಯನಿಕಗಳನ್ನು ಉತ್ಪಾದಿಸುವವರ ವಿರುದ್ಧ ಸರ್ಕಾರ ಶೀಘ್ರದಲ್ಲೇ ಹೊಸ ಕಾನೂನನ್ನು ಪರಿಚಯಿಸಲಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪುನರುಚ್ಚರಿಸಿದರು. ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ರೈತರಿಗೆ ವಿಮಾ ಮೊತ್ತದ ಡಿಜಿಟಲ್ ಪಾವತಿಯನ್ನು ವಿತರಿಸಲಾಗುತ್ತಿರುವ ಬಗ್ಗೆ ಪ್ರಸ್ತಾಪಿಸಿದ ಸಚಿವರು, ರೈತರ ಕಲ್ಯಾಣಕ್ಕಾಗಿ ವಿವಿಧ ಯೋಜನೆಗಳನ್ನು ಆದ್ಯತೆಯ ಮೇಲೆ ಮುಂದುವರಿಸಲಾಗುತ್ತಿದೆ ಎಂದರು. ರೈತರು ಭಾರತವನ್ನು ಪೋಷಿಸಲು ಮಾತ್ರವಲ್ಲ. ಜಗತ್ತನ್ನು ಪೋಷಿಸಲು ಹಗಲಿರುಳು ಕೆಲಸ ಮಾಡುತ್ತಾರೆ. ರೈತರು ಜೀವ ಮತ್ತು ಜೀವನ ನೀಡುವವರು ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

><><><><><><><

ಭಾರತ-ಸಿಂಗಾಪುರ ಸಚಿವರ ದುಂಡುಮೇಜಿನ ೩ನೇ ಸುತ್ತಿನ ಸಭೆ ನವದೆಹಲಿಯಲ್ಲಿ ಇಂದು ನಡೆಯಲಿದೆ. ಕೇಂದ್ರ ಸಚಿವರಾದ ಡಾ. ಎಸ್.ಜೈಶಂಕರ್, ನಿರ್ಮಲಾ ಸೀತಾರಾಮನ್, ಅಶ್ವಿನಿ ವೈಷ್ಣವ್ ಮತ್ತು ಪಿಯೂಷ್ ಗೋಯಲ್ ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಿಂಗಾಪುರದ ಉಪ ಪ್ರಧಾನಿ ಗ್ಯಾನ್ ಕಿಮ್ ಯೋಂಗ್ ಮತ್ತು ವಿದೇಶಾಂಗ ಸಚಿವೆ

ಜೋಸೆಫೀನ್ ಟಿಯೊ ಸೇರಿದಂತೆ ಸಿಂಗಾಪುರದ ಸಚಿವರು ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭಾರತ-ಸಿಂಗಾಪುರ ಸಹಕಾರಕ್ಕಾಗಿ ಹೊಸ ಕಾರ್ಯಸೂಚಿಯನ್ನು ರೂಪಿಸಲು ಸಚಿವರ ದುಂಡುಮೇಜಿನ ಸಭೆಯು ಒಂದು ವಿಶಿಷ್ಟ ಕಾರ್ಯವಿಧಾನವಾಗಿದೆ. ಭಾರತ ಮತ್ತು ಸಿಂಗಾಪುರ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಹಂಚಿಕೊಂಡಿವೆ. ೩ನೇ ಸುತ್ತಿನ ಸಚಿವರ ದುಂಡುಮೇಜಿನ ಸಭೆಯು ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ವಿಸ್ತರಿಸಲು ಮತ್ತು ಬಲಗೊಳಿಸಲು ಮಾರ್ಗಗಳನ್ನು ಗುರುತಿಸುತ್ತದೆ ಎಂದು ಸಚಿವಾಲಯ ಹೇಳಿದೆ. ಭಾರತ-ಸಿಂಗಾಪುರ ಸಚಿವರ ದುಂಡುಮೇಜಿನ ಉದ್ಘಾಟನಾ ಸಭೆಯು ೨೦೨೨ ರ ಸೆಪ್ಟೆಂಬರ್‌ನಲ್ಲಿ ನವದೆಹಲಿಯಲ್ಲಿ ನಡೆದಿತ್ತು.

><><><><><><><><

ವೈಜ್ಞಾನಿಕ ಕುತೂಹಲವನ್ನು ಪೋಷಿಸಲು ಮತ್ತು ಯುವ ಮನಸ್ಸುಗಳನ್ನು ಸಬಲೀಕರಣಗೊಳಿಸಲು ಭಾರತ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.  ಮುಂಬೈನಲ್ಲಿ ನಿನ್ನೆ ಆರಂಭವಾದ ೧೮ನೇ ಅಂತಾರಾಷ್ಟ್ರೀಯ ಖಗೋಳಶಾಸ್ತ್ರ ಮತ್ತು ಖಗೋಳ ಭೌತಶಾಸ್ತ್ರ ಒಲಿಂಪಿಯಾಡ್ ಉದ್ದೇಶಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿದ ಪ್ರಧಾನಿ, ಭಾರತವು ಸಹಯೋಗದ ಶಕ್ತಿಯನ್ನು ನಂಬುತ್ತದೆ ಮತ್ತು ಈ ಒಲಿಂಪಿಯಾಡ್ ಆ ಮನೋಭಾವವನ್ನು ಪ್ರತಿಬಿಂಬಿಸುತ್ತದೆ ಎಂದರು. ಈ ಕಾರ್ಯಕ್ರಮವನ್ನು ಮುಂಬೈನ ಟಾಟಾ ಇನ್ಸ್ಟಿಟ್ಯೂಟ್ ಆಫ್ ಫಂಡಮೆಂಟಲ್ ರಿಸರ್ಚ್‌ನ ಹೋಮಿ ಬಾಬಾ ಸೆಂಟರ್ ಫಾರ್ ಸೈನ್ಸ್ ಎಜುಕೇಶನ್ ಆಯೋಜಿಸಿದೆ. ಸಮಾರಂಭದಲ್ಲಿ ಪ್ರಧಾನ ವೈಜ್ಞಾನಿಕ ಸಲಹೆಗಾರ ಪ್ರೊಫೆಸರ್ ಅಜಯ್ ಕುಮಾರ್ ಸೂದ್, ಪರಮಾಣು ಇಂಧನ ಇಲಾಖೆಯ ಕಾರ್ಯದರ್ಶಿ ಡಾ. ಅಜಿತ್ ಕುಮಾರ್ ಮೊಹಂತಿ ಮತ್ತು ಅಂತಾರಾಷ್ಟ್ರೀಯ ಖಗೋಳ ಒಕ್ಕೂಟದ ಮಾಜಿ ಉಪಾಧ್ಯಕ್ಷ ಪ್ರೊಫೆಸರ್ ಅಜಿತ್ ಕೆಂಭಾವಿ ಉಪಸ್ಥಿತರಿದ್ದರು. ೧೦ ದಿನಗಳ ಈ ಕಾರ್ಯಕ್ರಮದಲ್ಲಿ ೬೪ ದೇಶಗಳಿಂದ ಒಟ್ಟು ೨೮೮ ವಿದ್ಯಾರ್ಥಿಗಳು ಭಾಗವಹಿಸಿದ್ದಾರೆ.

><><><><><><><><

ಒಬ್ಬ ವ್ಯಕ್ತಿಗೆ ಕನಿಷ್ಠ ಎರಡು ವರ್ಷ ಜೈಲು ಶಿಕ್ಷೆ ಹಾಗೂ ಏಳು ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಅವಧಿಗೆ ಜೈಲು ಶಿಕ್ಷೆ ವಿಧಿಸಬಹುದಾದ ಅಪರಾಧಕ್ಕಾಗಿ ಆರೋಪಪಟ್ಟಿ ಸಲ್ಲಿಸಿದ್ದರೆ, ಅಂತಹ ವ್ಯಕ್ತಿಗೆ ವಿದೇಶಿ ನಾಗರಿಕ ನೋಂದಣಿ ರದ್ದಾಗುವ ಸಾಧ್ಯತೆಯಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಕೇಂದ್ರ ಗೃಹ ಸಚಿವಾಲಯ ಈ ಬಗ್ಗೆ ಅಧಿಸೂಚನೆ ಹೊರಡಿಸಿದೆ.

><><><><><><><><

ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ಶಂಕಿತ ಗೂಢಚಾರನನ್ನು ಗುಪ್ತಚರ ಇಲಾಖೆ ಬಂಧಿಸಿದೆ. ೩೨ ವರ್ಷದ ಆರೋಪಿ ಮಹೇಂದ್ರ ಪ್ರಸಾದ್,  ಚಂದನ್ ಫೀಲ್ಡ್ ಫೈರಿಂಗ್ ರೇಂಜ್‌ನಲ್ಲಿರುವ ಡಿಆರ್‌ಡಿಓ ಅತಿಥಿ ಗೃಹದ ವ್ಯವಸ್ಥಾಪಕನಾಗಿ ಕೆಲಸ ಮಾಡುತ್ತಿದ್ದ. ಉತ್ತರಾಖಂಡದ ಅಲ್ಮೋರಾ ಪಲ್ಯುನ್ ಮೂಲದ ಆರೋಪಿ, ಸಾಮಾಜಿಕ ಮಾಧ್ಯಮದ ಮೂಲಕ ಪಾಕಿಸ್ತಾನದ ಗುಪ್ತಚರ ಸಂಸ್ಥೆಯೊಂದಿಗೆ ಸಂಪರ್ಕದಲ್ಲಿರುವುದು ತನಿಖೆಗಳಿಂದ ತಿಳಿದುಬಂದಿದೆ. ಡಿಆರ್‌ಡಿಓ ಕಾರ್ಯಾಚರಣೆಗಳು ಮತ್ತು ಭಾರತೀಯ ಸೇನೆಯ ಚಟುವಟಿಕೆಗಳಿಗೆ ಸಂಬಂಧಿಸಿದ ಸೂಕ್ಷ್ಮ ಮಾಹಿತಿಯನ್ನು ಆತ ಪಾಕಿಸ್ತಾನದ ವ್ಯಕ್ತಿಗಳೊಂದಿಗೆ ಹಂಚಿಕೊಂಡಿದ್ದಾನೆ ಎಂಬುದನ್ನು ತನಿಖೆಯು ದೃಢಪಡಿಸಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

><><><><><><><><

ಚೀನಾದ ಚೆಂಗ್ಡುವಿನಲ್ಲಿ ನಿನ್ನೆ ನಡೆದ ೨೦೨೫ ರ ವಿಶ್ವ ಕ್ರೀಡಾಕೂಟದ ಮಹಿಳೆಯರ ೫೨ ಕೆಜಿ ವುಶು ಫೈನಲ್‌ನಲ್ಲಿ ಭಾರತದ ನಮ್ರತಾ ಬಾತ್ರಾ ಬೆಳ್ಳಿ ಪದಕ ಗೆಲ್ಲುವ ಮೂಲಕ ಇತಿಹಾಸ ಬರೆದಿದ್ದಾರೆ. ಕಳೆದ ವರ್ಷ ಏಷ್ಯನ್ ಚಾಂಪಿಯನ್‌ಶಿಪ್‌ನಲ್ಲಿ ಬೆಳ್ಳಿ

ಗೆದ್ದ ಮತ್ತು ನಾಲ್ಕು ಬಾರಿ ರಾಷ್ಟ್ರೀಯ ಚಾಂಪಿಯನ್ ಆಗಿರುವ ೧೪ ವರ್ಷದ ನಮ್ರತಾ ಬಾತ್ರಾ ಫೈನಲ್‌ನಲ್ಲಿ ಚೀನಾದ ಮೆಂಗ್ಯು ಚೆನ್ ವಿರುದ್ಧ ೧-೦ ಅಂತರದಿಂದ ಸೋತರು. ವಿಶ್ವ ಕ್ರೀಡಾಕೂಟದಲ್ಲಿ ವುಶು ಕ್ರೀಡೆಯಲ್ಲಿ ಭಾರತಕ್ಕೆ ಇದು ಮೊದಲ ಪದಕ ಮತ್ತು ಪುರುಷರ ಸಂಯುಕ್ತ ಬಿಲ್ಲುಗಾರಿಕೆಯಲ್ಲಿ ರಿಷಭ್ ಯಾದವ್ ಅವರ ಕಂಚಿನ ಪದಕದ ನಂತರ ಈ ಆವೃತ್ತಿಯಲ್ಲಿ ದೇಶಕ್ಕೆ ಎರಡನೇ ಪದಕವಾಗಿದೆ. ಕ್ವಾರ್ಟರ್ ಫೈನಲ್‌ನಲ್ಲಿ ಲೆಬನಾನ್‌ನ ಬಾರ್ಬರಾ ಎಲ್ ರಾಸ್ಸಿ ವಿರುದ್ಧ ೧-೦ ಅಂತರದ ಜಯದೊಂದಿಗೆ ನಮ್ರತಾ ಅವರ ಅಭಿಯಾನ ಪ್ರಾರಂಭವಾಯಿತು. ನಂತರ ಸೆಮಿಸ್‌ನಲ್ಲಿ ಫಿಲಿಪೈನ್ಸ್‌ನ ಕ್ರಿಜಾನ್ ಫೇಯ್ತ್ ಕೊಲ್ಲಾಡೊ ವಿರುದ್ಧ ೧-೦ ಅಂತರದ ಅವರು ಗೆದ್ದರು. ಭಾರತ ಈಗ ವಿಶ್ವ ಕ್ರೀಡಾಕೂಟದ ಇತಿಹಾಸದಲ್ಲಿ ಒಟ್ಟು ಏಳು ಪದಕಗಳನ್ನು ಗೆದ್ದಿದೆ - ಅದರಲ್ಲಿ ಒಂದು ಚಿನ್ನ, ಎರಡು ಬೆಳ್ಳಿ ಮತ್ತು ನಾಲ್ಕು ಕಂಚು ಪದಕ ಸೇರಿದೆ.

><><><><><><><